ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	::	454
ಸದಸ್ಯರ ಹೆಸರು	::	ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ	::	15-09-2021
ಉತ್ತರಿಸುವ ಸಚಿವರು	::	ಕಂದಾಯ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಹಂಪಿ/ಕಿಷ್ಕಿಂದಾ-ಅಂಜನಾದ್ರಿ ಪ್ರದೇಶದ ವ್ಯಾಪ್ತಿಯಲ್ಲಿ ಹಲವು ಕಂದಾಯ ಕೃಷಿ ಭೂಮಿಗಳಲ್ಲಿ ಅನಧಿಕೃತವಾಗಿ ಗುಡಿಸಲು ಹಾಕಿ ರೆಸಾರ್ಟ್ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; (ವಿವರ ನೀಡುವುದು)	-ಬಂದಿದೆ- ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಹೊಸಪೇಟೆ ತಾಲ್ಲೂಕಿನ 14 ಗ್ರಾಮಗಳಲ್ಲಿ ಒಟ್ಟು 05 ಹಾಗೂ ಗಂಗಾವತಿ ತಾಲ್ಲೂಕಿನ 15 ಗ್ರಾಮಗಳಲ್ಲಿ ಒಟ್ಟು 36 ಕಂದಾಯ ಕೃಷಿ ಭೂಮಿಗಳಲ್ಲಿ ಅನಧಿಕೃತವಾಗಿ ಗುಡಿಸಲು ಹಾಕಿ ರೆಸಾರ್ಟ್ ನಿರ್ಮಿಸಿದವರಿಗೆ ಸದರಿ ಅನಧಿಕೃತ ರೆಸಾರ್ಟ್‌ಗಳನ್ನು ತೆರವುಗೊಳಿಸಲು ನೋಟೀಸನ್ನು ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಕಾಯ್ದೆ 2002ರ ಕಲಂ 14ರಡಿ ಜಾರಿಗೊಳಿಸಲಾಗಿದೆ.
ಆ)	ಪ್ರಸ್ತಾಪಿತ ಪ್ರದೇಶಗಳಲ್ಲಿ ಸ್ಥಾಪಿತವಾಗಿರುವ ಅನಧಿಕೃತ ರೆಸಾರ್ಟ್ ಮಾಲೀಕರಲ್ಲಿ ಕೆಲವರಿಗೆ ಮಾತ್ರ ಸರ್ಕಾರದಿಂದ ರೆಸಾರ್ಟ್ ತೆರವುಗೊಳಿಸುವ ನೋಟೀಸ್ ಜಾರಿ ಮಾಡಿ, ಇನ್ನುಳಿದವರಿಗೆ ಯಾವುದೇ ರೀತಿಯ ಕಾನೂನು ಕ್ರಮಗಳನ್ನು ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)	ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸ್ಥಾಪಿತವಾಗಿರುವ ಅನಧಿಕೃತ ಎಲ್ಲಾ ರೆಸಾರ್ಟ್ ಮಾಲೀಕರುಗಳಿಗೆ ಈ ಪ್ರಾಧಿಕಾರದಿಂದ ನೋಟೀಸ್ ಜಾರಿ ಮಾಡಲಾಗಿದೆ.
ಇ)	ಅನಧಿಕೃತ ರೆಸಾರ್ಟ್‌ಗಳನ್ನು ಸಕ್ರಮಗೊಳಿಸುವಂತೆ ಸರ್ಕಾರದ ಮೇಲೆ ಯಾವುದಾದರೂ ಪ್ರಭಾವ/ಸೂಚನೆಗಳು ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ನಿಲುವೇನು;(ವಿವರ ನೀಡುವುದು)	ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದಿಂದ ಅನಧಿಕೃತ ರೆಸಾರ್ಟ್‌ಗಳನ್ನು ಸಕ್ರಮಗೊಳಿಸುವಂತೆ ಯಾವುದೇ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ.
ಈ)	ಅನಧಿಕೃತವಾಗಿ ಸ್ಥಾಪಿತವಾಗಿರುವ ರೆಸಾರ್ಟ್‌ಗಳನ್ನು ಸಕ್ರಮಗೊಳಿಸುವ ಸಲುವಾಗಿ, ಸದರಿ ಐತಿಹಾಸಿಕ ಸ್ಥಳಗಳ ಪರಿಸರಕ್ಕೆ ಹಾನಿಯಾಗುವ ಕುರಿತು ಸರ್ಕಾರದ ವತಿಯಿಂದ ಸೂಕ್ತ ಅಧ್ಯಯನ ನಡೆಸಲು ಮುಂದಾಗಿದೆಯೇ? (ವಿವರ ನೀಡುವುದು)	

ಸಂಖ್ಯೆ:ಕಂಇ 23 ಎಲ್‌ಜಿಇ 2021

(ಆರ್.ಅಶೋಕ್)
ಕಂದಾಯ ಸಚಿವರು